**ಕರ್ನಾಟಕ ಸರ್ಕಾರ ನಡವಳಿಗಳು**

ವಿಷಯ : ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿನ ಆರ್ಥಿಕ ಇಲಾಖೆಯ ಲೋಕೋಪಯೋಗಿ ಆರ್ಥಿಕ ಕೋಶದಲ್ಲಿ ಒಂದು ಸಂಗ್ರಹಣಾ ಕೋಶವನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ** :1. ಸರ್ಕಾರದ ಅನಧಿಕೃತ ಟಿಪ್ಪಣಿ ಸಂಖ್ಯೆ: ಲೋಇ 1359 ಎಸ್‌ಓ.ಎಫ್‌ಸಿ 200 ದಿನಾಂಕ: 17.8.2002.

**ಪ್ರಸ್ತಾವನೆ :**

ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ) ಇವರು ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 17.8.2002ರ ಅನಧಿಕೃತ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯ ಲೋಕೋಪಯೋಗಿ ಆರ್ಥಿಕ ಕೋಶದಲ್ಲಿ ಒಂದು ಸಂಗ್ರಹಣಾ ಕೋಶವನ್ನು ಈ ಕೆಳಕಂಡ ಸಿಬ್ಬಂದಿ ಹುದ್ದೆಗಳೊಂದಿಗೆ ಸೃಜಿಸುವಂತೆ ಪ್ರಸ್ತಾವನೆ ಕಳುಹಿಸಿರುತ್ತಾರೆ.

| | | |
|---|---|---|
| 1. | ಉಪ ಕಾರ್ಯದರ್ಶಿ | 1 ಹುದ್ದೆ |
| 2. | ಶೀಘ್ರಲಿಪಿಗಾರ | 1 ಹುದ್ದೆ |
| 3. | ಹಿರಿಯ ಸಹಾಯಕ:ಸಹಾಯಕ | 1 ಹುದ್ದೆ |
| 4. | ಕಿರಿಯ ಸಹಾಯಕ | 1 ಹುದ್ದೆ |

ಈ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 39 ಸಸಿವಿ 2002, ಬೆಂಗಳೂರು, ದಿನಾಂಕ: 16.7.2003.**

ಸಂಗ್ರಹಣಾ ಪ್ರಕ್ರಿಯೆಯಲ್ಲಿ ಸುಧಾರಣೆ ಕೈಗೊಳ್ಳುವ ಸಲುವಾಗಿ ಆರ್ಥಿಕ ಇಲಾಖೆಯ ಲೋಕೋಪಯೋಗಿ ಆರ್ಥಿಕ ಕೋಶದಲ್ಲಿ ಒಂದು ಸಂಗ್ರಹಣಾ ಕೋಶವನ್ನು ಈ ಕೆಳಕಂಡ ಸಿಬ್ಬಂದಿ ಹುದ್ದೆಗಳೊಂದಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಒಂದು ವರ್ಷದವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸೃಜಿಸಲು ಮಂಜೂರಾತಿ ನೀಡಲಾಗಿದೆ.

| | | |
|---|---|---|
| 1. | ಉಪ ಕಾರ್ಯದರ್ಶಿ | 1 ಹುದ್ದೆ |
| 2. | ಶೀಘ್ರಲಿಪಿಗಾರ | 1 ಹುದ್ದೆ |
| 3. | ಕಿರಿಯ ಸಹಾಯಕ | 1 ಹುದ್ದೆ |

ಅನಾವಶ್ಯಕ ಹುದ್ದೆಗಳನ್ನು ಮುಂದುವರಿಸಬಾರದೆಂಬ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯಲ್ಲಿ ದೀರ್ಘಕಾಲದಿಂದ ಖಾಲಿ ಇರುವ ಒಂದು ಸಂಶೋಧನಾಧಿಕಾರಿ ಹುದ್ದೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಯು.ಪಿ. ಪ್ರಭು**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಸೇವೆಗಳು-2)